ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ವಿಜಯಪುರದಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣವನ್ನು ನಿರ್ಮಾಣ ಮಾಡುವ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

230 (203) ಮಾನ್ಯಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರ ನಗರ ಪ್ರದೇಶದ ಮಹಲಬಾಗಾಯತ್ ರಿ.ಸ.ನಂ. 313 ಮತ್ತು 314ರಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣವನ್ನು ನಿರ್ಮಾಣ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿಜಯಪುರ ಜಿಲ್ಲೆಯಲ್ಲಿ ಜಿಲ್ಲಾ ಕಛೇರಿಗಳ ಸಂಕೀರ್ಣ ನಿರ್ಮಾಣದ ಕುರಿತು ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗಿನ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾಗಿದೆಯೇ ; ಸ್ವೀಕೃತವಾಗಿದ್ದರೆ, ಆಡಳಿತಾತ್ಮಕ ಅನುಮೋದನೆ ನೀಡಲು ವಿಳಂಬ ಮಾಡುತ್ತಿರುವುದು ಏಕೆ ; ಯಾವಾಗ ಅನುಮೋದನೆ ನೀಡಲಾಗುವುದು ; ಅನುಮೋದನೆ ನೀಡದಿರಲು ಕಾರಣವೇನು ;

(ಇ) ಸದರಿ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ ?